# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎನ್.ಅಪ್ಪಿರೆಡ್ಡಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಶ್ರೀನಿವಾಸಪುರ (ಪ್ರಸ್ತುತ ಅಮಾನತ್ತಿನಲ್ಲಿ) ಇವರ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿ ಸ್ಥಳ ನಿಯುಕ್ತಿ ನೀಡುವ ಬಗ್ಗೆ ಆದೇಶ.

**ಓದಲಾಗಿದೆ:-**

1. ಅಪರ ಪೋಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರ ಪತ್ರ ಸಂಖ್ಯೆ ಎಸಿಬಿ/ಕೋಲಾರ/ಮೊ.ಸಂ/ 03/2018 ದಿನಾಂಕ 26.03.2018.

2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 32 ಇಎನ್‌ಕ್ಯೂ 2018, ದಿನಾಂಕ:21.6.2018.

3. ಶ್ರೀ ಅಪ್ಪಿರೆಡ್ಡಿ, ಸ.ಕಾ.ಇಂ ಇವರ ಮನವಿ ದಿನಾಂಕ:27.9.2018.

****

<u>ಪ್ರಸ್ತಾವನೆ:</u>

ಅಪರ ಪೋಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರು ಶ್ರೀ ಎನ್.ಅಪ್ಪಿರೆಡ್ಡಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಶ್ರೀನಿವಾಸಪುರ ಇವರ ವಿರುದ್ಧ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿರುತ್ತಾರೆ ಎಂಬ ಆರೋಪಗಳಿಗೆ ಸಂಬಂಧಿಸಿದಂತೆ ಭ್ರಷ್ಟಾಚಾರ ನಿಗ್ರಹ ದಳ, ಕೋಲಾರ ಪೋಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ 03/2018ನ್ನು ಭ್ರಷ್ಟಾಚಾರ ನಿರೋಧ ಕಾಯ್ದೆ 1988ರ ಕಲಂ 13(1)(ಇ) ಸಹವಾಚನ 13(2)ರ ರೀತ್ಯಾ ದಾಖಲಿಸಿಕೊಂಡು, ತನಿಖೆ ಕೈಗೊಂಡಿದ್ದು, ಪೂರ್ವಭಾವಿ ತನಿಖಾ ವರದಿ ಹಾಗೂ ಇತರೆ ದಾಖಲೆಗಳನ್ನು ಮೇಲೆ ಓದಲಾದ ದಿನಾಂಕ 26.03.2018ರ ಪತ್ರದ ಜೊತೆ ಸರ್ಕಾರಕ್ಕೆ ಸಲ್ಲಿಸಿದ್ದರು.

ಅಪರ ಪೋಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರು ಸಲ್ಲಿಸಿದ್ದ ಪೂರ್ವಭಾವಿ ತನಿಖಾ ವರದಿ ಹಾಗೂ ಲಭ್ಯಪಡಿಸಿದ ಮಾಹಿತಿಯನುಸಾರ ಆಪಾದಿತರಾದ ಶ್ರೀ ಎನ್.ಅಪ್ಪಿರೆಡ್ಡಿ ರವರು ತಮ್ಮ ಬಲ್ಲ ಮೂಲಗಳಿಗಿಂತ ಹೆಚ್ಚಿನ ಆದಾಯ ಹೊಂದಿರುವುದು ಪ್ರಾಥಮಿಕ ತನಿಖೆಯಲ್ಲಿ ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಸದರಿಯವರನ್ನು ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:21.6.2018 ರಂದು ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಶ್ರೀ ಎನ್.ಅಪ್ಪಿರೆಡ್ಡಿ, ಸ.ಕಾ.ಇಂ ಇವರು ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕ:27.9.2018 ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿ ತಮ್ಮನ್ನು ಅಮಾನತ್ತುಗೊಳಿಸಿ ಮೂರು ತಿಂಗಳ ಅವಧಿ ಮುಕ್ತಾಯಗೊಂಡಿರುವುದರಿಂದ ಜೀವನ ನಿರ್ವಹಣೆ ಮಾಡಲು ತೊಂದರೆಯಾಗಿರುತ್ತದೆಯೆಂದು ಆದ್ದರಿಂದ, ತಮ್ಮ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸುವಂತೆ ಕೋರಿರುತ್ತಾರೆ.

ಸರ್ಕಾರವು ಶ್ರೀ ಎನ್.ಅಪ್ಪಿರೆಡ್ಡಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಮನವಿಯನ್ನು ಪರಿಶೀಲಿಸಿರುತ್ತದೆ. ಸದರಿಯವರ ವಿರುದ್ಧ ದಾಖಲಾಗಿರುವ ಪ್ರಕರಣದ ತನಿಖೆಯನ್ನು ಭ್ರಷ್ಟಾಚಾರ ನಿಗ್ರಹ ದಳ ಪೂರ್ಣಗೊಳಿಸಲು ಸಾಕಷ್ಟು ಸಮಯದ ಅವಶ್ಯಕತೆ ಇರುತ್ತದೆ. ಅಲ್ಲದೆ

---2

ಶ್ರೀ ಎನ್. ಅಪ್ಪಿರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಅಮಾನತ್ತುಪಡಿಸಿ 4 ತಿಂಗಳಿಗೂ ಹೆಚ್ಚಿನ ಅವಧಿ ಗತಿಸಿರುವುದರಿಂದ ಶ್ರೀ ಅಪ್ಪಿರೆಡ್ಡಿ, ಇವರ ವಿರುದ್ಧದ ಕ್ರಮಗಳನ್ನು ಬಾಕಿ ಇರಿಸಿ ಅವರ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿ, ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಸ್ಥಳವನ್ನು ಹೊರತುಪಡಿಸಿ, ಬೇರೆ ಸ್ಥಳಕ್ಕೆ ಸ್ಥಳ ನಿಯುಕ್ತಿ ನೀಡಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ, ಈ ಆದೇಶ.

**<u>ಆದೇಶ ಸಂಖ್ಯೆ. ಗ್ರಾಅಪ 32 ಇಎನ್‌ಕ್ಯೂ 2018, ಬೆಂಗಳೂರು, ದಿನಾಂಕ:14.11.2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಎನ್.ಅಪ್ಪಿರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಭ್ರಷ್ಟಚಾರ ನಿಗ್ರಹ ದಳ ಪೊಲೀಸ್ ಠಾಣೆಯಲ್ಲಿ ಭ್ರಷ್ಟಾಚಾರ ನಿಗ್ರಹ ಕಾಯ್ದೆ 1988ರ ಕಲಂ 13(1)(ಇ) ಸಹವಾಚನ 13(2) ರಡಿ ದಾಖಲಾಗಿರುವ ಮೊಕದ್ದಮೆ ಸಂಖ್ಯೆ 03/2018 ರ ಪ್ರಕರಣಕ್ಕೆ ಸಂಬಂಧಿಸಿದಂತೆ ಕೈಗೊಳ್ಳಬಹುದಾದ ಕ್ರಮಗಳನ್ನು ಬಾಕಿ ಇರಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಅವರ ಅಮಾನತ್ತು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿದೆ ಹಾಗೂ ಮುಂದಿನ ಆದೇಶದವರಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಮುಳಬಾಗಿಲು ಇಲ್ಲಿ ಖಾಲಿ ಇರುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

14/11/2018

(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

14/11

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಅಪರ ಪೋಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ನಂ.49, ಖನಿಜ ಭವನ, ರೇಸ್‌ಕೋರ್ಸ್, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ.
6. ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ ಪೋಲೀಸ್‌ಠಾಣೆ, ಕೋಲಾರ.
7. ಸಂಬಂಧಪಟ್ಟ ಅಧಿಕಾರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರ ಮುಖಾಂತರ.
8. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ ಯವರಿಗೆ.
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ)/ ಇವರುಗಳ ಆಪ್ತ ಕಾರ್ಯದರ್ಶಿ /ಆಪ್ತ ಸಹಾಯಕರಿಗೆ.
10. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
11. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.